# Akashvani : Bangalore
# National Bulletin In Kannada
# 01.02.2025 / 19.35 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><*<><>*><>**

ಮುಖ್ಯಾಂಶಗಳು

**೧. ಉದ್ಯೋಗ ಆಧಾರಿತ ಪ್ರವಾಸೋದ್ಯಮ ಬೆಳವಣಿಗೆಗೆ ಕೇಂದ್ರ ಬಜೆಟ್‌ನಲ್ಲಿ ಒತ್ತು**

**೨. ರಾಮ್‌ಸರ್ ಜೌಗು ತಾಣಗಳ ಪಟ್ಟಿಗೆ ಹೊಸದಾಗಿ ನಾಲ್ಕು ತಾಣಗಳು ಸೇರ್ಪಡೆ**

**೩. ನವದೆಹಲಿಯಲ್ಲಿ 'ವಿಶ್ವ ಪುಸ್ತಕ ಮೇಳ ೨೦೨೫' ಉದ್ಘಾಟಿಸಿದ ರಾಷ್ಟ್ರಪತಿ ದ್ರೌಪದಿ ಮುರ್ಮು**

**೪. ಯೂರೋಪಿಯನ್ ಚಾಂಪಿಯನ್‌ಶಿಪ್; ಪುರುಷರ ೬೦ ಮೀಟರ್ ಹರ್ಡಲ್ಸ್ ಸ್ಪರ್ಧೆಯಲ್ಲಿ ಭಾರತದ ತೇಜಸ್ ಶಿರ್ಸೆ ಗೆ ಬೆಳ್ಳಿ**

**<><*<><>*><>**

ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ ಇಂದು ಸಂಸತ್ತಿನಲ್ಲಿ ೨೦೨೫-೨೦೨೬ರ ಬಜೆಟ್ ಮಂಡಿಸಿದರು. ಬಜೆಟ್‌ನಲ್ಲಿ ಎಲ್ಲಾ ತೆರಿಗೆ ಪಾವತಿದಾರರಿಗೆ ಅನುಕೂಲವಾಗುವಂತೆ ಆದಾಯ ತೆರಿಗೆ ಸ್ಲ್ಯಾಬ್‌ಗಳು ಮತ್ತು ದರಗಳಲ್ಲಿ ಬದಲಾವಣೆಗಳನ್ನು ತರಲಾಗಿದೆ. ಹೊಸ ತೆರಿಗೆ ಪದ್ಧತಿಯಡಿ ೧೨ ಲಕ್ಷ ರೂಪಾಯಿವರೆಗಿನ ವಾರ್ಷಿಕ ಆದಾಯಕ್ಕೆ ಯಾವುದೇ ಆದಾಯ ತೆರಿಗೆ ಇಲ್ಲ. ವಿಮಾ ವಲಯದಲ್ಲಿ ವಿದೇಶಿ ನೇರ ಹೂಡಿಕೆ-ಎಫ್.ಡಿ.ಐ ಮಿತಿಯನ್ನು ಶೇಖಡ ೭೪ ರಿಂದ ಶೇಖಡ ೧೦೦ ಕ್ಕೆ ಹೆಚ್ಚಳ ಮಾಡಲಾಗುತ್ತಿದೆ. ಈ ಹೆಚ್ಚಳದ ಮಿತಿಯು ಸಂಪೂರ್ಣ ಪ್ರೀಮಿಯಂ, ಭಾರತದಲ್ಲಿ ಹೂಡಿಕೆ ಮಾಡುವ ಕಂಪನಿಗಳಿಗೆ ಲಭ್ಯವಿರುತ್ತದೆ ಎಂದು ನಿರ್ಮಲಾ ಸೀತಾರಾಮನ್ ಹೇಳಿದರು. ನಗರ ಪ್ರದೇಶದ ಬಡ ಮತ್ತು ದುರ್ಬಲ ವರ್ಗಗಳ ಆದಾಯ ಸುಧಾರಿಸಲು, ಸುಸ್ಥಿರ ಜೀವನೋಪಾಯ ಮತ್ತು ಉತ್ತಮ ಗುಣಮಟ್ಟದ ಜೀವನವನ್ನು ಹೊಂದಲು ಸಹಾಯ ಮಾಡಲು ನಗರ ಕಾರ್ಮಿಕರ ಸಾಮಾಜಿಕ-ಆರ್ಥಿಕ ಉನ್ನತಿಗಾಗಿ ಯೋಜನೆಯನ್ನು ಜಾರಿಗೊಳಿಸಲಾಗುವುದು ಎಂದು ಅವರು ತಿಳಿಸಿದರು. ಆನ್‌ಲೈನ್ ಪ್ಲಾಟ್‌ಫಾರ್ಮ್‌ಗಳ ಗಿಗ್ ಕೆಲಸಗಾರಿಗೆ ಗುರುತಿನ ಚೀಟಿ ಮತ್ತು ಇ-ಶ್ರಮ್

ಪೋರ್ಟಲ್‌ನಲ್ಲಿ ನೋಂದಣಿಗೆ ವ್ಯವಸ್ಥೆ ಮಾಡಲಾಗುವುದು. ಅವರಿಗೆ ಪ್ರಧಾನಮಂತ್ರಿ ಜನ ಆರೋಗ್ಯ ಯೋಜನೆಯಡಿ ಆರೋಗ್ಯ ಸೇವೆ ಒದಗಿಸಲಾಗುವುದು. ಈ ಯೋಜನೆಯಿಂದ ಸುಮಾರು ೧ ಕೋಟಿ ಗಿಗ್ ಕೆಲಸಗಾರರಿಗೆ ಸಹಾಯವಾಗುವ ನಿರೀಕ್ಷೆ ಇದೆ ಎಂದು ನಿರ್ಮಲಾ ಸೀತಾರಾಮನ್ ಹೇಳಿದರು. ೨೦೨೫-೨೬ರ ಕೇಂದ್ರ ಬಜೆಟ್, ಪ್ರವಾಸೋದ್ಯಮವನ್ನು ಉದ್ಯೋಗ ಆಧಾರಿತ ಬೆಳವಣಿಗೆಗೆ ಒಂದು ವಲಯವೆಂದು ಗುರುತಿಸಿದೆ. ಉದ್ಯೋಗ ಆಧಾರಿತ ಬೆಳವಣಿಗೆಗೆ ಅನುಕೂಲವಾಗುವಂತೆ ಯುವಜನರಿಗೆ ಕೌಶಲ್ಯ ಅಭಿವೃದ್ಧಿ ಕಾರ್ಯಕ್ರಮಗಳನ್ನು ಆಯೋಜಿಸುವುದು, ಆತಿಥ್ಯ ನಿರ್ವಹಣೆ, ಹೋಂ ಸ್ಟೇಗಳಿಗೆ ಮುದ್ರಾ ಸಾಲಗಳು, ಪ್ರವಾಸಿ ತಾಣಗಳಿಗೆ ಪ್ರಯಾಣ ಮತ್ತು ಸಂಪರ್ಕದ ಸುಲಭತೆಯನ್ನು ಸುಧಾರಿಸುವುದು, ಸುವ್ಯವಸ್ಥಿತ ಇ-ವೀಸಾ ಸೌಲಭ್ಯಗಳನ್ನು ಪರಿಚಯಿಸುವುದು ಮತ್ತು ರಾಜ್ಯಗಳಿಗೆ ಕಾರ್ಯಕ್ಷಮತೆ-ಸಂಬಂಧಿತ ಪ್ರೋತ್ಸಾಹಕಗಳನ್ನು ನೀಡುವುದು ಮುಂತಾದ ಕ್ರಮಗಳನ್ನು ಒಳಗೊಂಡಿದೆ ಎಂದು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದರು. ೧.೫ ಲಕ್ಷ ಗ್ರಾಮೀಣ ಅಂಚೆ ಕಚೇರಿಗಳನ್ನು ಹೊಂದಿರುವ ಭಾರತೀಯ ಅಂಚೆ ಅನ್ನು 'ಇಂಡಿಯಾ ಪೋಸ್ಟ್ ಪಾವತಿ ಬ್ಯಾಂಕ್' ಮತ್ತು ೨.೪ ಲಕ್ಷ ಅಂಚೆ ಸೇವಕರ ವಿಶಾಲ ಪೂರಕ ಸಂಪರ್ಕ ಜಾಲವನ್ನು ಗ್ರಾಮೀಣ ಆರ್ಥಿಕತೆಗೆ ವೇಗವರ್ಧಕವಾಗಿ ಕಾರ್ಯನಿರ್ವಹಿಸಲು ಮರುಸ್ಥಾಪಿಸಲಾಗುವುದು ಎಂದು ತಿಳಿಸಿದರು. ಸಣ್ಣ ಮಾಡ್ಯುಲರ್ ರಿಯಾಕ್ಟರ್‌ಗಳ ಸಂಶೋಧನೆ ಮತ್ತು ಅಭಿವೃದ್ಧಿಗಾಗಿ ೨೦ ಸಾವಿರ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಪರಮಾಣು ಶಕ್ತಿ ಮಿಷನ್ ಅನ್ನು ಸ್ಥಾಪಿಸಲಾಗುವುದು ಎಂದು ನಿರ್ಮಲಾ ಸೀತಾರಾಮನ್ ಹೇಳಿದರು.

**<><*<><>*><>**

ರೈತರು, ಮಹಿಳೆಯರು, ಯುವಜನತೆ ಹಾಗೂ ಬಡ ವರ್ಗದ ಜನರ ಜೀವನಮಟ್ಟ ಸುಧಾರಿಸುವುದು ಸೇರಿದಂತೆ, ದೇಶದ ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡಿ, ವಿಕಸಿತ ಭಾರತ ನಿರ್ಮಾಣದ ದೃಢ ಹೆಜ್ಜೆಗೆ ಈ ಬಜೆಟ್ ಪೂರಕವಾಗಿದೆ ಎಂದು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಹೇಳಿದ್ದಾರೆ. ಬಜೆಟ್ ಕುರಿತು ಆಕಾಶವಾಣಿಗೆ ಪ್ರತಿಕ್ರಿಯೆ ನೀಡಿದ ಅವರು, ಕೇಂದ್ರ ಸರ್ಕಾರ, ೨೦೨೫-೨೬ ನೇ ಸಾಲಿನ ಬಜೆಟ್‌ನಲ್ಲಿ ಕೃಷಿ, ಶಿಕ್ಷಣ, ಆರೋಗ್ಯ, ಕೈಗಾರಿಕೆ, ತಂತ್ರಜ್ಞಾನ, ಕೌಶಲ್ಯ ಅಭಿವೃದ್ಧಿ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಪೂರಕವಾಗಿದೆ ಎಂದರು.

**ಧ್ವನಿ: ಈರಣ್ಣ ಕಡಾಡಿ, ರಾಜ್ಯಸಭಾ ಸದಸ್ಯ**

**<><*<><>*><>**

ಕೇಂದ್ರ ಆಯವ್ಯಯ ಕುರಿತಂತೆ ಇಂದು ಸಂಜೆ ೭.೪೫ ಕ್ಕೆ ಬಜೆಟ್ ಕುರಿತ ಚರ್ಚೆ ಮೂಡಿಬರಲಿದೆ. ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಸುರೇಶ್ ಸಾಗರ್ ಹಾಗೂ ಹಿರಿಯ ಪತ್ರಕರ್ತೆ ಆಶಾ ಕೃಷ್ಣ ಸ್ವಾಮಿ ಚರ್ಚೆಯಲ್ಲಿ ಭಾಗವಹಿಸಲಿದ್ದಾರೆ. ಹಿರಿಯ ಪತ್ರಕರ್ತರಾದ ನಾರಾಯಣಸ್ವಾಮಿ ಚರ್ಚೆಯನ್ನು ನಡೆಸಿಕೊಡಲಿದ್ದಾರೆ.

<><*<><>*><>

ಭಾರತದಲ್ಲಿ ಹೊಸದಾಗಿ ನಾಲ್ಕು ರಾಮ್‌ಸರ್ ಜೌಗು ತಾಣಗಳನ್ನು ಕೇಂದ್ರ ಸರ್ಕಾರ ಘೋಷಿಸಿದೆ. ಇದರಿಂದಾಗಿ ದೇಶದಲ್ಲಿ ರಾಮ್‌ಸರ್ ಜೌಗು ತಾಣಗಳ ಸಂಖ್ಯೆ ೮೯ಕ್ಕೆ ಏರಿಕೆಯಾಗಿದೆ. ವಿಶ್ವ ಜೌಗು ಪ್ರದೇಶ ದಿನದ ಹಿನ್ನೆಲೆಯಲ್ಲಿ ತಮಿಳುನಾಡಿನ ಸಕ್ಕರಕೋಟ್ಟೈ ಪಕ್ಷಿಧಾಮ, ತೀರ್ಥಂಗಲ್ ಪಕ್ಷಿಧಾಮ, ಸಿಕ್ಕಿಂನ ಖೆಚಿಯೋಪಾಲ್ರಿ ಜೌಗು ಪ್ರದೇಶ ಮತ್ತು ಜಾರ್ಖಂಡ್‌ನ ಉಧ್ವಾ ಸರೋವರವನ್ನು ದೇಶದ ರಾಮ್‌ಸರ್ ಜೌಗು ತಾಣಗಳ ಪಟ್ಟಿಯಲ್ಲಿ ಸೇರಿಸಲಾಗಿದೆ ಎಂದು ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ ತಿಳಿಸಿದೆ.

<><*<><>*><>

ಪುಸ್ತಕ ಓದುವುದು ಕೇವಲ ಹವ್ಯಾಸವಲ್ಲ. ಬದಲಾಗಿ ಅದೊಂದು ಪರಿವರ್ತನಾ ಅನುಭವ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅಭಿಪ್ರಾಯಪಟ್ಟಿದ್ದಾರೆ. ನವದೆಹಲಿಯ ಭಾರತ ಮಂಟಂಪನಲ್ಲಿ ಇಂದು 'ನವದೆಹಲಿ ವಿಶ್ವ ಪುಸ್ತಕ ಮೇಳ-೨೦೨೫' ಉದ್ಘಾಟಿಸಿ ಅವರು ಮಾತನಾಡಿದರು. ವಿವಿಧ ಭಾಷೆಗಳು ಮತ್ತು ಸಂಸ್ಕೃತಿಗಳ ಪುಸ್ತಕವನ್ನು ಓದುವುದು ಪ್ರದೇಶಗಳು ಮತ್ತು ಸಮುದಾಯಗಳ ನಡುವೆ ಸೇತುವೆಗಳನ್ನು ನಿರ್ಮಿಸುತ್ತಿವೆ ಎಂದು ಹೇಳಿದ ರಾಷ್ಟ್ರಪತಿಗಳು, ಮಕ್ಕಳಿಗಾಗಿ ಪುಸ್ತಕಗಳ ರಚನೆ ಮತ್ತು ಪ್ರಚಾರಕ್ಕೆ ವಿಶೇಷ ಪ್ರಾಮುಖ್ಯತೆ ನೀಡುವಂತೆ ಮನವಿ ಮಾಡಿದರು.

<><*<><>*><>

ಇಂದು ಭಾರತೀಯ ಕರಾವಳಿ ರಕ್ಷಣಾ ಪಡೆಗಳ ಸ್ಥಾಪನಾ ದಿನ. ಈ ಹಿನ್ನೆಲೆಯಲ್ಲಿ ಭಾರತೀಯ ಕರಾವಳಿ ರಕ್ಷಣಾ ಪಡೆಯನ್ನು ಶ್ಲಾಘಿಸಿರುವ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಸಮುದ್ರ ಭದ್ರತೆಯಿಂದ ವಿಪತ್ತು ಪ್ರತಿಕ್ರಿಯೆಯವರೆಗೆ, ಕಳ್ಳಸಾಗಣೆ ವಿರೋಧಿ ಕಾರ್ಯಾಚರಣೆಗಳಿಂದ ಪರಿಸರ ರಕ್ಷಣೆಯವರೆಗೆ, ಭಾರತೀಯ ಕರಾವಳಿ ರಕ್ಷಣಾ ಪಡೆಯು ನಮ್ಮ ಸಮುದ್ರಗಳ ಅಸಾಧಾರಣ ಹಾಗೂ ವಿಶೇಷ ರಕ್ಷಕರಾಗಿದ್ದು, ನಮ್ಮ ನೀರು ಮತ್ತು ಜನರ ಸುರಕ್ಷತೆಯನ್ನು ಖಚಿತಪಡಿಸುತ್ತದೆ ಎಂದು ಹೇಳಿದ್ದಾರೆ.

<><*<><>*><>

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರು, ಉತ್ತರಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭ ಮೇಳಕ್ಕೆ ಇಂದು ಭೇಟಿ ನೀಡಿದ್ದು, ಗಂಗಾ, ಯಮುನಾ, ಸರಸ್ವತಿ ನದಿಗಳ ಸಂಗಮವಾದ ತ್ರಿವೇಣಿ ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿದರು. ಇದಕ್ಕೂ ಮುನ್ನ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಉಪರಾಷ್ಟ್ರಪತಿಗಳನ್ನು ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಸ್ವಾಗತಿಸಿದರು. ಇನ್ನೊಂದೆಡೆ, ೭೭ ದೇಶಗಳ ನಿಯೋಗದ ಪ್ರತಿನಿಧಿಗಳು ಕೂಡ ಪ್ರಯಾಗ್‌ರಾಜ್‌ನಲ್ಲಿ ಪವಿತ್ರ ಸ್ನಾನ ಕೈಗೊಂಡರು. ಅಲ್ಲದೆ, ಅಕ್ಷಯ್‌ವತ್ ಮತ್ತು ಬಡೇ ಹನುಮಾನ್ ದೇಗುಲಕ್ಕೆ ಭೇಟಿ ನೀಡಿದರು.

<><*<><>*><>

ಫ್ರಾನ್ಸ್‌ನಲ್ಲಿ ನಡೆದ ಯುರೋಪಿಯನ್ ಹೊರಾಂಗಣ ಚಾಂಪಿಯನ್‌ಶಿಪ್‌ನ ಪುರುಷರ ೬೦ ಮೀಟರ್ ಹರ್ಡಲ್ಸ್ ಸ್ಪರ್ಧೆಯಲ್ಲಿ ಭಾರತದ ತೇಜಸ್ ಶಿರ್ಸೆ ಬೆಳ್ಳಿ ಪದಕ ವಿಜೇತರಾಗಿದ್ದಾರೆ. ಅವರು, ೭.೬೪ ಸೆಕೆಂಡ್‌ಗಳಲ್ಲಿ ಗುರಿಯನ್ನು ತಲುಪುವ ಮೂಲಕ ಹೊಸ ರಾಷ್ಟ್ರೀಯ ದಾಖಲೆ ನಿರ್ಮಿಸಿದ್ದಾರೆ. ಇದೇ ವೇಳೆ ಸ್ಪೇನ್‌ನ ಎನ್ರಿಕ್ ಲೋಪಿಸ್ ಚಿನ್ನ ಮತ್ತು ಫ್ರಾನ್ಸ್ ವಿಲ್ಹೆಮ್ ಬೆಲೋಸಿಯನ್ ಕಂಚಿನ ಪದಕ ಗೆದ್ದಿದ್ದಾರೆ.

<><*<><>*><>

ಒಡಿಶಾದ ರೂರ್ಕೆಲಾದ ಬಿರ್ಸಾ ಮುಂಡಾ ಹಾಕಿ ಕ್ರೀಡಾಂಗಣದಲ್ಲಿಂದು ಹಾಕಿ ಇಂಡಿಯಾ ಲೀಗ್ ಪಂದ್ಯದಲ್ಲಿ ಹೈದರಾಬಾದ್ ತೂಫಾನ್ಸ್ ತಂಡ, ಶ್ರಾಚಿ ರಾರ್ಹ್ ಬೆಂಗಾಲ್ ಟೈಗರ್ಸ್ ತಂಡವನ್ನು ಎದುರಿಸಲಿದೆ. ಪಂದ್ಯ ರಾತ್ರಿ ೮.೧೫ ಕ್ಕೆ ಆರಂಭವಾಗಲಿದೆ.

<><*<><>*><>

ಮಲೇಷಿಯಾದ ಕೌಲಾಲಂಪುರದಲ್ಲಿ ನಾಳೆ ನಡೆಯಲಿರುವ ೧೯ ವರ್ಷದೊಳಗಿನ ಮಹಿಳೆಯರ ಐಸಿಸಿ ಟಿ-೨೦ ವಿಶ್ವಕಪ್ ಫೈನಲ್ ಪಂದ್ಯದಲ್ಲಿ ಭಾರತ ಮತ್ತು ದಕ್ಷಿಣ ಆಫ್ರಿಕಾ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೧೨ ಗಂಟೆಗೆ ಆರಂಭವಾಗಲಿದೆ. ಮತ್ತೊಂದೆಡೆ, ಮುಂಬೈನ ವಾಖಂಡೆ ಕ್ರೀಡಾಂಗಣದಲ್ಲಿ ನಾಳೆ ನಡೆಯಲಿರುವ

ಅಂತಾರಾಷ್ಟ್ರೀಯ ಟಿ-೨೦ ಸರಣಿಯ ಐದನೇ ಪಂದ್ಯದಲ್ಲಿ ಭಾರತ ತಂಡ, ಇಂಗ್ಲೆಂಡ್ ವಿರುದ್ಧ ಸೆಣಸಲಿದೆ. ಪಂದ್ಯ ರಾತ್ರಿ ೭ ಗಂಟೆಗೆ ಆರಂಭವಾಗಲಿದೆ.

**<><*<><>*><>**

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ- ಸೆನ್ಸೆಕ್ಸ್ ೫ ಅಂಕಗಳು ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ ೭೭ ಸಾವಿರದ ೫೦೯ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ- ನಿಫ್ಟಿ, ೧೯ ಅಂಕಗಳು ಇಳಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೩ ಸಾವಿರದ ೪೮೨ ಅಂಕಗಳು ದಾಖಲಾಗಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**